# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 53 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 31–08–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 53 | Title- Code: KARKAN 28269 | Chitradurga | Date: 31-08-2023 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**


ಬಡವರ ಆರ್ಥಿಕತೆ ಸುಧಾರಣೆಗೆ ಗೃಹಲಕ್ಷ್ಮಿ ಸಹಕಾರಿ; ಶಾಸಕ ಟಿ.ರಘುಮೂರ್ತಿ **2**

ಗೃಹಲಕ್ಷ್ಮೀ ಯೋಜನೆ ಮಹಿಳೆಯರಲ್ಲಿ ಆರ್ಥಿಕ ಶಕ್ತಿ ತುಂಬಿದೆ: ಬಿಜೆಪಿ ಶಾಸಕ ಎಂ.ಚಂದ್ರಪ್ಪ **3**

ಸಾಮಾಜಿಕ ನ್ಯಾಯದ ಪರಿಕಲ್ಪನೆಯಲ್ಲಿ 5 ಗ್ಯಾರಂಟಿ ಕೊಟ್ಟು, ಪ್ರಾರಂಭ; ಸಚಿವ **4**


### ಮನೆಗೆ ಬಂದಳು ಗೃಹಲಕ್ಷ್ಮಿ: ಜಿಲ್ಲೆಯಲ್ಲಿ 3.54 ಲಕ್ಷ ನೋಂದಣಿ

# ಮಹಿಳಾ ಸಬಲೀಕರಣಕ್ಕೆ ಬದ್ಧ: ಸಚಿವ ಸುಧಾಕರ್





**ಗೃಹಲಕ್ಷ್ಮಿ ಯೋಜನೆಯ ಸಂಭ್ರಮದಲ್ಲಿ ಮಹಿಳೆಯರು.**

» **ಚಿತ್ರದುರ್ಗ**

ಚುನಾವಣೆಗೂ ಮುನ್ನ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಸರ್ಕಾರ ಅತಿದೊಡ್ಡ ಖಾತ್ರಿ ಯೋಜನೆಯಾದ ಗೃಹಲಕ್ಷ್ಮೀ ಯೋಜನೆಗೆ ಚಾಲನೆ ನೀಡಿದೆ. ಮಹಿಳೆಯರ ಸಬಲೀಕರಣಕ್ಕೆ ಸರ್ಕಾರ ಸದಾ ಬದ್ಧವಾಗಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಬುಧವಾರ ನಗರದ ತರಾಸು ರಂಗಮಂದಿರಲ್ಲಿ ಜಿಲ್ಲಾಡಳಿತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ನಗರಸಭೆ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ, ಮೈಸೂರಿನಲ್ಲಿ ನಡೆದ ಗೃಹಲಕ್ಷ್ಮೀ ಯೋಜನೆಯ ಚಾಲನಾ ಕಾರ್ಯಕ್ರಮದ ನೇರ ಪ್ರಸಾರ ಹಾಗೂ ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಗೆ ಚಾಲನೆ ನೀಡಿ, ಅವರು ಮಾತನಾಡಿದರು.

ಈ ಹಿಂದೆ ಜಾರಿಗೊಳಿಸಿದ, ಮಹಿಳೆಯರು ಉಚಿತವಾಗಿ ಬಸ್‌ಗಳಲ್ಲಿ ಪ್ರಯಾಣಿಸುವ "ಶಕ್ತಿ" ಯೋಜನೆಗೆ ಉತ್ತಮ ಸ್ಪಂದನೆ ದೊರೆತಿದೆ. ಮಹಿಳೆಯರ ಬಸ್ ಪ್ರಯಾಣದಿಂದಾಗಿ ಸದಾ ನಷ್ಟದಿಂದ ಬಳಲುತ್ತಿದ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಲಾಭದತ್ತ ಮುಖ ಮಾಡಲು ಯೋಜನೆ ಕಾರಣವಾಗಿದೆ. ಇದೀಗ ನಮ್ಮ ಸರ್ಕಾರ ಗೃಹಲಕ್ಷ್ಮಿ ಯೋಜನೆಯನ್ನು ಜಾರಿಗೊಳಿಸುತ್ತಿದ್ದು, ಮನೆಯ ಯಜಮಾನಿಗೆ ಪ್ರತಿ ತಿಂಗಳು 2000 ರೂ. ನೇರವಾಗಿ ಅವರ ಬ್ಯಾಂಕ್ ಖಾತೆಗೆ ಜಮಾ ಆಗಲಿದೆ. ಮಹಿಳೆಯರ ಸಬಲೀಕರಣಕ್ಕೆ ಈ ಯೋಜನೆ ಪೂರಕವಾಗಿದೆ. ಗೃಹಲಕ್ಷ್ಮೀ ಯೋಜನೆ ನೊಂದಣಿಗೆ ಯಾವುದೇ ಕಾಲಮಿತಿ ಇಲ್ಲ. ಅರ್ಹರು ಈಗಲೂ ಅರ್ಜಿ ಸಲ್ಲಿಸುವುದರ ಮೂಲಕ ಯೋಜನೆಯ ಲಾಭ ಪಡೆಯಲು ನೋಂದಾಯಿಸಿಕೊಳ್ಳಬಹುದು. ಈ ಹಿಂದೆ 2014 ರಿಂದ 2018 ವರೆಗೆ ಅಧಿಕಾರ ನಡೆಸಿದ ನಮ್ಮ ಪಕ್ಷದ ಸರ್ಕಾರ ಪ್ರಣಾಳಿಕೆಯಲ್ಲಿ ನೀಡಿದ 168 ಭರವಸೆಗಳನ್ನು ಈಡೇರಿಸಿದ್ದು ಮಾತ್ರವಲ್ಲದೆ, ಇನ್ನೂ ಹಲವಾರು ಯೋಜನೆ ಜಾರಿಗೊಳಿಸಿತ್ತು. ಈ ಬಾರಿಯೂ ಪ್ರಣಾಳಿಕೆಯಲ್ಲಿ ನೀಡಿದ ಅಷ್ಟು ಭರವಸೆಗಳನ್ನು ಈಡೇರಿಸಲಾಗುವುದು. ಈಗಾಗಲೆ ನಾವು ನೀಡಿದ ಗ್ಯಾರಂಟಿ ಭರವಸೆಗಳಲ್ಲಿ ನಾಲ್ಕು ಗ್ಯಾರಂಟಿಗಳನ್ನು ಈಡೇರಿಸಿದ್ದೇವೆ. ನಮ್ಮ ಗ್ಯಾರಂಟಿ ಯೋಜನೆಗಳು ಜನರ ಕಲ್ಯಾಣಕ್ಕೆ ನೆರವಾಗಿವೆ ಎಂದರು. ಚಿತ್ರದುರ್ಗ ಜಿಲ್ಲೆಯ ಜನತೆಯ ಪ್ರಮುಖ ಭೇಡಿಕೆಯಾದ ಭದ್ರಾ ಮೇಲ್ದಂಡೆ ಯೋಜನೆಯನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು. ಈಗಾಗಲೇ ಚಿತ್ರದುರ್ಗ ವೈದ್ಯಕೀಯ ಕಾಲೇಜು ಹಾಗೂ ಸಂಶೋಧನಾ ಸಂಸ್ಥೆ ಸ್ಥಾಪನೆಗೆ ಮುನ್ನಡಿ ಬರೆಯಲಾಗಿದೆ. ಪ್ರಸಕ್ತ ವರ್ಷದಿಂದಲೇ ವೈದ್ಯಕೀಯ ಕಾಲೇಜು ಆರಂಭವಾಗಿಲಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಗೃಹಲಕ್ಷ್ಮೀ ಯೋಜನೆಯಡಿ ರಾಜ್ಯದ 1.10 ಕೋಟಿ ಕುಟುಂಬಗಳ ಯಜಮಾನಿಗೆ ಪ್ರತಿ ತಿಂಗಳು ರೂ.2000 ನೇರವಾಗಿ ಖಾತೆ ಜಮೆ ಮಾಡಲಾಗುವುದು. ಜಿಲ್ಲೆಯಲ್ಲಿ ಖಾತ್ರಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನ ಮಾಡಲಾಗುತ್ತಿದೆ. ಮಹಿಳೆಯರು ಇದರ ಲಾಭಗಳನ್ನು ಪಡೆದುಕೊಳ್ಳುವಂತೆ ಕರೆ ನೀಡಿದರು.

ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಮಾತನಾಡಿ ಗೃಹಲಕ್ಷ್ಮೀ ಯೋಜನೆಯಡಿ ಈವರೆಗೆ ಒಟ್ಟು 3.54 ಲಕ್ಷ ಮಹಿಳೆಯರು ನೊಂದಣಿ ಮಾಡಿಸಿದ್ದು, ಫಲಾನುಭವಿಗಳ ನೋಂದಣಿಯಲ್ಲಿ ಚಿತ್ರದುರ್ಗ ಜಿಲ್ಲೆ ರಾಜ್ಯದಲ್ಲೇ 2ನೇ ಸ್ಥಾನದಲ್ಲಿದೆ. ಮಹಿಳೆಯನ್ನು ಕೇಂದ್ರವಾಗಿಸಿಕೊಂಡು ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ. ಮಹಿಳೆಯರು ಆರ್ಥಿಕವಾಗಿ ಸಬಲರಾಗುವುದರೊಂದಿಗೆ ಸ್ವಾವಲಂಬಿ ಹಾಗೂ ಸ್ವಾಭಿಮಾನದ ಜೀವನ ಕಟ್ಟಿಕೊಳ್ಳಬೇಕು. ಮಹಿಳೆಯರು ಸ್ವಂತ ನಿರ್ಧಾರಗಳನ್ನು ಕೈಗೊಳ್ಳುವ ಮನೋಭಾವ ರೂಢಿಸಿಕೊಳ್ಳಬೇಕು, ಜೀವನದಲ್ಲಿ ಅಭಿವೃದ್ಧಿ ಹೊಂದಬೇಕು ಎಂದರು.

ಪುಟ ↘ 2




## ಫಾಸ್ಟ್ ನ್ಯೂಸ್

### ಮಹಿಳೆಯರಿಗೆ ದೊಡ್ಡ ಶಕ್ತಿ ನಮ್ಮ ಸರ್ಕಾರ ಕೊಟ್ಟಿದೆ

ಸರ್ಕಾರ ಬಂದ 100 ದಿನದ ಸಂಭ್ರಮದಲ್ಲಿ ಗೃಹಲಕ್ಷ್ಮಿಗೆ ಚಾಲನೆ ನೀಡಿದ್ದೇವೆ ಎಂದು ಹುಬ್ಬಳ್ಳಿಯಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹ್ಮದ್ ಹೇಳಿದರು. ಇವತ್ತು ರಾಜ್ಯದ 12 ಸಾವಿರ ಸ್ಥಳಗಳಲ್ಲಿ ಕಾರ್ಯಕ್ರಮ ನಡೆದಿದೆ. ಮಹಿಳೆಯರಿಗೆ ದೊಡ್ಡ ಶಕ್ತಿ ನಮ್ಮ ಸರ್ಕಾರ ಕೊಟ್ಟಿದ್ದೇವೆ ಎಂದರು.

### ಊಟಕ್ಕಾಗಿ ಗೃಹ ಲಕ್ಷ್ಮಿಯರ ತಳ್ಳಾಟ

ಕೋಲಾರದ ಶಾಂತಿ ಕಲ್ಯಾಣ ಮಂಟಪದಲ್ಲಿ ಗೃಹ ಲಕ್ಷ್ಮಿ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು. ಕಾರ್ಯಕ್ರಮಕ್ಕೆ ಬಂದ ಮಹಿಳೆಯರಿಗೆ ಊಟದ ವ್ಯವಸ್ಥೆ ಮಾಡಲಾಗಿತ್ತು. ಮೊಸರನ್ನ, ಪಲಾವ್ ನೀಡಲಾಗಿದೆ. ಕಾರ್ಯಕ್ರಮ ಮುಗಿಯುವ ಮುನ್ನವೆ ಊಟಕ್ಕೆ ಗೃಹ ಲಕ್ಷ್ಮಿಯರು ಹಾಜರಾಗಿದ್ದು, ಊಟಕ್ಕಾಗಿ ತಳ್ಳಾಟ ನೂಕಾಟ ಉಂಟಾಗಿತ್ತು.

### ಕಾಂಗ್ರೆಸ್ ನೇತೃತ್ವದಲ್ಲಿ 4ನೇ ಗ್ಯಾರಂಟಿ ಜಾರಿ

ಮಲ್ಲಿಕಾರ್ಜುನ ಖರ್ಗೆ, ರಾಹುಲ್ ನೇತೃತ್ವದಲ್ಲಿ ಯೋಜನೆಗೆ ಚಾಲನೆ ನೀಡಿದ್ದೇವೆ. ಗೃಹಲಕ್ಷ್ಮೀ ಯೋಜನೆಗೆ 1.11 ಕೋಟಿ ಮಹಿಳೆಯರಿಂದ ನೋಂದಣಿ ಮಾಡಲಾಗಿದೆ. ರಾಜ್ಯದ ಸಹೋದರಿಯರು, ತಾಯಂದಿರ ರಕ್ಷಣೆ ಮಾಡುವ ಕೆಲಸ ಮಾಡಲಾಗುತ್ತಿದೆ. ಸಿಎಂ, ಡಿಸಿಎಂ ನೇತೃತ್ವದಲ್ಲಿ ಎಲ್ಲಾ ಗ್ಯಾರಂಟಿಗಳ ಜಾರಿ ಮಾಡುತ್ತೇವೆ ಎಂದು ರಾಮನಗರದಲ್ಲಿ ಕಾಂಗ್ರೆಸ್ ಸಂಸದ ಡಿ.ಕೆ.ಸುರೇಶ್ ಹೇಳಿದರು.

### ಸಚಿವ ಶರಣಬಸಪ್ಪ ದರ್ಶನಾಪುರ ಪ್ರತಿಕ್ರಿಯೆ


ಚುನಾವಣೆ ಸಂದರ್ಭದಲ್ಲಿ ನಮ್ಮ ಪಕ್ಷ ಐದು ಗ್ಯಾರೆಂಟಿಗಳ ಭರವಸೆ ಕೊಟ್ಟಿತ್ತು. ಅದರಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆ ಜಾರಿಗೆ ಬಂದಿದೆ ಎಂದು ಸಚಿವ ಶರಣಬಸಪ್ಪ ದರ್ಶನಾಪುರ ಹೇಳಿದರು. ರಾಷ್ಟ್ರೀಯ ನಾಯಕರಾದ ರಾಹುಲ್ ಗಾಂಧಿ ಅವರು ಮೈಸೂರಿನಲ್ಲಿ ಉದ್ಘಾಟನೆ ಮಾಡಿದ್ದಾರೆ. ಜಿಲ್ಲೆಯಲ್ಲಿ ಸಹ ಗ್ರಾಮ ಪಂಚಾಯಿತಿ ಪುರಸಭೆ, ನಗರಸಭೆ ವಾರ್ಡ್ ಮಟ್ಟದಲ್ಲಿ ಕಾರ್ಯಕ್ರಮಗಳಿಗೆ ಚಾಲನೆ ಕೊಟ್ಟಿದ್ದೇವೆ. ಜಿಲ್ಲೆಯಲ್ಲಿ ಸುಮಾರು 2 ಲಕ್ಷ 17 ಸಾವಿರ ಫಲಾನುಭವಿಗಳು ನೋಂದಣಿ ಆಗಿದ್ದಾರೆ.

### ಜು.10ರಂದು ಅನ್ನಭಾಗ್ಯ ಯೋಜನೆಗೆ ಅಧಿಕೃತ ಚಾಲನೆ ನೀಡಿದ್ದೆವು

ಶಕ್ತಿ ಯೋಜನೆಯಡಿ ಜೂನ್ 11ರಿಂದ 48.50 ಕೋಟಿ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದಾರೆ. ಜುಲೈ 10ರಂದು ಅನ್ನಭಾಗ್ಯ ಯೋಜನೆಗೆ ಅಧಿಕೃತ ಚಾಲನೆ ನೀಡಿದ್ದೆವು. ಅನ್ನಭಾಗ್ಯ ಯೋಜನೆಗೆ ಹೆಚ್ಚುವರಿ ಅಕ್ಕಿ ನೀಡಲು ಕೇಂದ್ರ ನಿರಾಕರಿಸಿತ್ತು ಎಂದು ಸಿದ್ದರಾಮಯ್ಯ ಹೇಳಿದರು.

### ಕಾಂಗ್ರೆಸ್ ಸಾಧನೆಯ ರೆಕಾರ್ಡ್ ನನ್ನ ಬಳಿ ಇದೆ- ಖರ್ಗೆ

ಎಸ್‌ಟಿ, ಎಸ್‌ಗಳ ಶಿಕ್ಷಣ ಕೇವಲ 7% ಇತ್ತು. ನಾವು



60% ಮಾಡಿದ್ದೇವೆ. ಕಾಂಗ್ರೆಸ್ 50 ವರ್ಷದಲ್ಲಿ ಏನು ಮಾಡಿಲ್ಲ ಅಂತ ಹೇಳ್ತಾರೆ. ನಾವು ಮಾಡಿದ್ದು ಬಹಳ ಇದೆ. 1947ರ ಹಿಂದೆ 2 ಲಕ್ಷ ಪ್ರಾಥಮಿಕ ಶಾಲೆಗಳಿದ್ದವು. ಈಗ 8 ಲಕ್ಷ ಇದೆ. ನರೇಗಾ ನಾವು ತಂದಿದ್ದು, ಸೋನಿಯಾ ಗಾಂಧಿಯವರು ಫುಡ್ ಸೆಕ್ಯೂರಿಟಿ □□□ಕ್ಟ್ ತಂದ್ರು, ಅದಕ್ಕೆ ಉಚಿತ ಅನ್ನ ಭಾಗ್ಯವೂ ನಾವು ತಂದದ್ದು. ಬಡವರಿಗಾಗಿ ನಾವು ಯೋಜನೆಗಳನ್ನು ಮಾಡಿದ್ದೇವೆ. ಆದರೆ ಅವರು ಶ್ರೀಮಂತರಿಗಾಗಿದ್ದಾರೆ. ಇಲ್ಲಿ ಮೋದಿ ಅಂತ ಹೇಳಿದರೆ ಕೇಸ್ ಹಾಕ್ತಾರೆ. ಮೋದಿ ಎಂದಿದಕ್ಕೆ ರಾಹುಲ್ ಗಾಂಧಿ ಮೇಲೆ ಕೇಸ್ ಹಾಕಿದರು. ಆದ್ರೆ ರಾಹುಲ್ ಯಾವುದಕ್ಕೂ ಹೆದರುವುದಿಲ್ಲ. ಕನ್ಯಾಕುಮಾರಿಯಿಂದ ಕಶ್ಮೀರವರೆಗೆ ಪಾದಯಾತ್ರೆ ಮಾಡಿ ರಾಹುಲ್ ಗಾಂಧಿ ಜನರ ಮಾತು ಆಲಿಸಿದ್ದಾರೆ. ಕೇಂದ್ರದ ಯಾವ ನಾಯಕ ಈ ರೀತಿ ಮಾಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

### ಕೇಂದ್ರ ನಾಯಕರ ವಿರುದ್ಧ ಖರ್ಗೆ ವಾಗ್ದಾಳಿ

ಕೇಂದ್ರ ನಾಯಕರು ಹೇಳುತ್ತಾರೆ 50 ವರ್ಷದಲ್ಲಿ ಕಾಂಗ್ರೆಸ್ ಏನು ಮಾಡಿದೆ ಎಂದು. ಆದ್ರೆ ನಾವು ವಿಮಾನ ನಿಲ್ದಾಣ, ಅನೇಕ ಸಂಸ್ಥೆಗಳನ್ನು ಮಾಡಿದ್ದೇವೆ. ನಾವು ಮಾಡಿದ ಕೆಲಸಗಳಲ್ಲಿ ಹುಡುಕಾಡಿ ಸುಟ್ಟ ಬಣ್ಣ ಬಳಿದು ತಮ್ಮದೆನ್ನುತ್ತಾರೆ. ನಮ್ಮ ಬಳಿ ಕಾಂಗ್ರೆಸ್ ಸರ್ಕಾರ ಏನು ಮಾಡಿದೆ ಎಂಬ ರಿಪೋರ್ಟ್ ಕಾರ್ಡ್ ಇದೆ. ನೆಹರು, ಇಂದಿರಾ ಗಾಂದಿ, ಸೋನಿಯಾ ಗಾಂದಿ ಮಾಡಿದ ಎಲ್ಲಾ ಕಾರ್ಯಗಳ ರಿಪೋರ್ಟ್ ನಮ್ಮ ಬಳಿ ಇದೆ. 14% ಇಂದ 74% ಜನರಿಗೆ ನಮ್ಮ ಸರ್ಕಾರದ ಸಮಯದಲ್ಲಿ ಶಿಕ್ಷಿತರನ್ನಾಗಿ ಮಾಡಲಾಗಿದೆ.

---

### ಬಡವರ ಆರ್ಥಿಕತೆ ಸುಧಾರಣೆಗೆ ಗೃಹಲಕ್ಷ್ಮಿ ಸಹಕಾರಿ; ಶಾಸಕ ಟಿ.ರಘುಮೂರ್ತಿ

# ಕಾಂಗ್ರೆಸ್ ಬಡವರ ಕಲ್ಯಾಣದ ಪಕ್ಷ


» **ಚಳ್ಳಕೆರೆ**

ತಾಲ್ಲೂಕಿನ ಸುಮಾರು 77219 ಜನ ಫಲಾನುಭವಿಗಳು ಗೃಹಲಕ್ಷ್ಮಿ ಯೋಜನೆಯ ಫಲ ಪಡೆಯಲಿದ್ದಾರೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಕಂಬಳಿ ಮಾರುಕಟ್ಟೆ ಆವರಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಶಿಶು ಅಭಿವೃದ್ದಿ ಯೋಜನೆ, ನಗರಸಭೆ ಆಡಳಿತ ಸಹಯೋಗದಲ್ಲಿ ಗೃಹಲಕ್ಷ್ಮಿ ಯೋಜನೆಯನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಚಳ್ಳಕೆರೆ ನಗರ ವ್ಯಾಪ್ತಿಯಲ್ಲಿ ಒಟ್ಟು 6 ಕಡೆ ಈ ಯೋಜನೆ ಒಂದೇ ಹಂತದಲ್ಲಿ ಜಾರಿಯಾಗುತ್ತಿದೆ, ಚುನಾವಣೆ ಸಂದರ್ಭದಲ್ಲಿ ಮಹಿಳೆಯರಿಗೆ ನೀಡಿದ ಭರವಸೆಯನ್ನು ಈಡೇರಿಸುವಲ್ಲಿ ಸರ್ಕಾರ ಹೆಚ್ಚು ಒತ್ತು ನೀಡುತ್ತಿದೆ. ಈಗಾಗಲೇ ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ ಯೋಜನೆ ಜಾರಿಯಲಿದ್ದು,ಪ್ರಸ್ತುತಯೋಜನೆಸರ್ಕಾರ ನಾಲ್ಕನೇ ಗ್ಯಾರಂಟಿಯಾಗಿದೆ. ಮುಂದಿನ ಡಿಸೆಂಬರ್‌ನಲ್ಲಿ ವಿದ್ಯಾನಿಧಿಯನ್ನು ಜಾರಿಗೊಳಿಸಲಾಗುವುದು ಎಂದರು.

ರಾಜ್ಯದಲ್ಲಿ ಸುರ್ಧೀಘ ಕಾಲ ಆಡಳಿತ ನಡೆದ ಏಕೈಕ ರಾಷ್ಟ್ರೀಯ ಪಕ್ಷ ಕಾಂಗ್ರೆಸ್. ಕಾಂಗ್ರೆಸ್ ಪಕ್ಷಕ್ಕೆ ಪರ್ಯಾಯ ಹೆಸರು ಬಡವರ ಕಲ್ಯಾಣದ ಪಕ್ಷ. ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಗ್ಯಾರಂಟಿ ಯೋಜನೆ ಜಾರಿಗೆ







> ನಮ್ಮ ಸರ್ಕಾರ ನುಡಿದಂತೆ ನಡದಿದೆ.ರಾಜ್ಯದಲ್ಲಿ ಬಡವರ ಪರವಾದ ಸರ್ಕಾರ ರಚನೆಯಾಗಿದೆ.ನಮ್ಮ ಸರ್ಕಾರ ಐದು ಗ್ಯಾರೆಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಲು ಬದ್ದವಾಗಿದೆ.
>
> » **ಟಿ.ರಘುಮೂರ್ತಿ ಶಾಸಕರು ಚಳ್ಳಕೆರೆ**

ತರುವಮೂಲಕಬಡವರು,ಕಡುಬಡವರು, ನಿರ್ಗತಿಕರು ಹಾಗೂ ಸೂರು ಇಲ್ಲದೆ ಪರಿತಪಿಸುವ ಜನತೆಗೆ ಕಾಂಗ್ರೆಸ್ ಪಕ್ಷ ಆಸರೆಯಾಗಿದೆ. ಗರೀಬಿ ಹಟಾವೋನಿಂದ ಹಿಡಿದು ಇಂದಿನ ಐದು ಗ್ಯಾರಂಟಿಗಳ ಭರವಸೆಯನ್ನು ಜಾರಿಗೊಳಿಸುವ ಮೂಲಕ ಕಾಂಗ್ರೆಸ್ ಮತ್ತೊಮ್ಮೆ ಬಡವರ ಹಿತ ಕಾಯುವ ಪಕ್ಷವೆಂದು ಸಾಬೀತು ಪಡಿಸಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಿಡಿಪಿಓ ಹರಿಪ್ರಸಾದ್, ಚಳ್ಳಕೆರೆ ತಾಲ್ಲೂಕಿನಾದ್ಯಂತ ಒಟ್ಟು 88920 ಫಲಾನುಭವಿಗಳು ಗುರುತಿಸಿದ್ದು, ಈ ಪೈಕಿ 77219 ಫಲಾನುಭವಿಗಳು ಮಾತ್ರ ನೊಂದಾವಣೆಯಾಗಿದೆ. ಹಲವಾರು ತಾಂತ್ರಿಕ ಕಾರಣಗಳಿಂದ ಸುಮಾರು 11 ಸಾವಿರ ಫಲಾನುಭವಿಗಳು ಈ ಯೋಜನೆ ವ್ಯಾಪ್ತಿಗೆ ಸೇರ್ಪಡೆಯಾಗಿಲ್ಲ. ಕೆಲವೊಂದು ದಾಖಲಾತಿ ಪಡೆದು ಅವರಿಗೂ ಸಹ ಈ ಯೋಜನೆಯ ಸದುಪಯೋಗವನ್ನು ಪಡೆಯುವಂತೆ ಮಾಡಲಾಗುವುದು ಎಂದರು.

ಗೃಹಲಕ್ಷ್ಮಿ ಯೋಜನೆ ಜಾರಿ ಕುರಿತು ನಗರಸಭೆ ಸದಸ್ಯ ಮಂಜುಳಾ, ಮಹಿಳೆಯರಾದ ಉಷಾ, ಪದ್ಮಲತಾ, ರೇಣುಕಾ ಮುಂತಾದವರು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ರೇಹಾನ್ ಪಾಷ, ಪೌರಾಯುಕ್ತ ಸಿ.ಚಂದ್ರಪ್ಪ, ನಗರಸಭಾ ಸದಸ್ಯರಾದ ರಮೇಶ್‌ಗೌಡ, ಮಲ್ಲಿಕಾರ್ಜುನ, ವಿರೂಪಾಕ್ಷಿ, ಚಳ್ಳಕೆರೆಯಪ್ಪ, ಸಾವಿತ್ರಮ್ಮ, ಕವಿತಾಬೋರಯ್ಯ, ಸುಮ ಭರಮಣ್ಣ, ಸುಮಕ್ಕ, ಕೆ.ವೀರಭದ್ರಪ್ಪ, ಎಂ.ಜೆ. ರಾಘವೇಂದ್ರ, ಮಾಜಿ ತಾಲ್ಲೂಕು ಪಂಚಾಯಿತಿ ಸದಸ್ಯ ಗದ್ದಿಗೆ ತಿಪ್ಪೇಸ್ವಾಮಿ ಉಣ್ಣೆಕೈಮಗ್ಗದಅಧ್ಯಕ್ಷಬಿ.ಮಲ್ಲಿಕಾರ್ಜುನಪ್ಪ ಮುಂತಾದವರು ಉಪಸ್ಥಿತರಿದ್ದರು.

---

# ಆರ್ಥಿಕ ಸಬಲತೆಯಿಂದ ಬಲಿಷ್ಠ ಸಮಾಜ ನಿರ್ಮಾಣ ಸಾಧ್ಯ: ಶಾಸಕ ಗೋವಿಂದಪ್ಪ

» **ಹೊಸದುರ್ಗ**

ರಾಜ್ಯದಲ್ಲಿ ಇಂದು ಗೃಹಲಕ್ಷ್ಮಿ ಯೋಜನೆಯು ಅಧಿಕೃತವಾಗಿ ಚಾಲನೆಯಾಗಿದ್ದು ರಾಜ್ಯದ 1 ಕೋಟಿ 20 ಲಕ್ಷ ಕುಟುಂಬದ ಮನೆಯ ಯಜಮಾನಿಗೆ ಪ್ರತಿ ತಿಂಗಳು 2000 ರೂ ನಗದು ವರ್ಗಾವಣೆ ಮಾಡಲಿದ್ದು ಈ ಯೋಜನೆಯ ಅನುಕೂಲವು ನಮ್ಮ ತಾಲೂಕಿನ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ 43705 ಕುಟುಂಬಗಳು ನೊಂದಾಣಿ ಮಾಡಿಸಿದ್ದು ಹಾಗೂ ಪುರಸಭೆ ವ್ಯಾಪ್ತಿಯಲ್ಲಿ 4032 ಕುಟುಂಬಗಳು ನೊಂದಾಣಿ ಮಾಡಿಸಿದ್ದು ಈ ಯೋಜನೆಯ ಉಪಯೋಗ ಪಡೆಯಲಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು.

ಪಟ್ಟಣದ ಸಿದ್ದರಾಮೇಶ್ವರ ಭವನದಲ್ಲಿ ತಾಲೂಕು ಆಡಳಿತ, ಪುರಸಭೆ ತಾಲೂಕು ಪಂಚಾಯಿತಿ, ಶಿಶು ಅಭಿವೃದ್ಧಿ ಯೋಜನೆ ವತಿಯಿಂದ ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಗೃಹಲಕ್ಷ್ಮಿ ಯೋಜನೆಣಟಿಜಜಜುಟಿಜಜ ಅನುಷ್ಠಾನದ ಉದ್ಘಾಟನಾ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

100 ದಿನಗಳ ಸಂಭ್ರಮದಲ್ಲಿರುವ ರಾಜ್ಯ ಸರ್ಕಾರ ಇಂದು ಮತ್ತೊಂದು ಗ್ಯಾರಂಟಿ ಜಾರಿಗೆ ತಂದಿದೆ. ಮನೆ ಯಜಮಾನಿಗೆ ಮಾಸಿಕ 2000 ರೂಪಾಯಿ ನೀಡುವ 'ಗೃಹಲಕ್ಷ್ಮಿ' ಯೋಜನೆಗೆ



ಚಾಲನೆ ನೀಡಿಲಾಗಿದ್ದು ಹೊಸದುರ್ಗ ತಾಲ್ಲೋಕಿನ 47737 ಕುಟುಂಬಗಳಿಗೆ ಒಟ್ಟು ಒಂಬತ್ತು ಕೋಟಿ ಐವತ್ತು ನಾಲ್ಕು ಲಕ್ಷದ ಎಪ್ಪತ್ತು ನಾಲ್ಕು ಸಾವಿರ (9.54.74.000) ರೂಗಳನ್ನು ತಾಲೂಕಿನ ನೊಂದಾಣಿ ಯಜಮಾನಿಯರಿಗೆ ಹಣ ತಲುಪಲಿದೆ. ಮಹಿಳೆಯರ ಸಬಲೀಕರಣದಿಂದ ಬಲಿಷ್ಠ ಸಮಾಜ ನಿರ್ಮಾಣ ಸಾಧ್ಯ ಎಂದು ತಿಳಿಸಿದರು.

ಚುನಾವಣಾ ಪೂರ್ವದಲ್ಲಿ ನಮ್ಮ ಸರ್ಕಾರ ನೀಡಿದ ಭರವಸೆಗಳನ್ನ ನಾವುಗಳು ಹಂತ ಹಂತವಾಗಿ ಈಡೇರಿಸಿದ್ದೇವೆ. ಸ್ವಾವಲಂಬಿ ಬದುಕು ಕಟ್ಟಿಕೊಳ್ಳುವ ಅವರ ಕನಸನ್ನು ನನಸಾಗಿಸುವ ಗೃಹಲಕ್ಷ್ಮಿ ಯೋಜನೆಯನ್ನು ಸಿದ್ದರಾಮಯ್ಯ ಅವರು ಜಾರಿಗೆ ತಂದಿದ್ದಾರೆ. ಮಹಿಳಾ ಪರವಾದ ಇನ್ನು ಅನೇಕ ಯೋಜನೆಗಳನ್ನು ಜಾರಿಗೆ ತರುವ ಮೂಲಕ ರಾಜ್ಯ ಸರಕಾರ ಮಹಿಳ ಸಬಲೀಕರಣಕ್ಕೆ ಪ್ರಾಮುಖ್ಯತೆ ನೀಡಲಿದೆ ಎಂದರು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಪಟ್ಟರಾಜಗೌಡ. ಕಾರ್ಯನಿರ್ವಾಹಕ ಅಧಿಕಾರಿ ಸುನಿಲ್ ಕುಮಾರ್. ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅಭಿಲಾಷ. ಪುರಸಭಾ ಮುಖ್ಯಾಧಿಕಾರಿ ಜಿ.ವಿ.ತಿಮ್ಮರಾಜು, ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೊಸಿನ್. ಪುರಸಭೆ ಮುಖ್ಯ ಅಧಿಕಾರಿ ತಿಮ್ಮರಾಜು ಈ ಜಿ. ವಿ. ಸಮಾಜ ಕಲ್ಯಾಣಾಧಿಕಾರಿ ಶ್ರೀಮತಿಕಾಳಮ್ಮ, ಪೊಲೀಸ್ ನಿರೀಕ್ಷಕರಾದ ತಿಮ್ಮಣ್ಣ ಎನ್. ಪುರಸಭಾ ಸದಸ್ಯರಾದ ಶಂಕರಪ್ಪ, ನಾಗರಾಜ್,ದೊಡ್ಡಯ್ಯ. ಜಾಫರ್,ಸಾಧಿಕ್. ಡಾ:ಸ್ವಾತಿಪ್ರದೀಪ್. ಭಾಗವಹಿಸಿದ್ದರು

---

### ಮಂತ್ರಾಲಯದ ರಾಯರ ಆರಾಧನೆಯ ಸಪ್ತರಾತ್ರೋತ್ಸವ ಶುರು



» **ರಾಯಚೂರು**

ಮಂತ್ರಾಲಯದ ಶ್ರೀ ರಾಘವೇಂದ್ರ ಮಹಾಸ್ವಾಮಿಗಳ 352ನೇ ಆರಾಧನಾ ಮಹೋತ್ಸವಕ್ಕೆ ಚಾಲನೆ ಸಿಕ್ಕಿದೆ. ಮಂತ್ರಾಲಯ ಮಠದ ಪೀಠಾಧಿಪತಿ ಶ್ರೀ ಸುಭುದೇಂದ್ರ ತೀರ್ಥರು ಮೊದಲು ಅಶ್ವ ಪೂಜೆ, ಗೋ ಪೂಜೆ,ಲಕ್ಷ್ಮೀ ಪೂಜೆ ನೆರವೇರಿಸಿದ್ರು. ನಂತರ ಶ್ರೀಗಳು ಧ್ವಜಾರೋಹಣ ನೇರವೇರಿಸುವ ಮೂಲಕ ರಾಯರ ಆರಾಧನಾ ಮಹೋತ್ಸವಕ್ಕೆ ಚಾಲನೆ ನೀಡಿದ್ದು, ಇಂದಿನಿಂದ ಮಂತ್ರಾಲಯ ರಾಯರ ಮಠದಲ್ಲಿ ಏಳು ದಿನಗಳ ಕಾಲ ನಡೆಯಲಿರುವ ರಾಯರ ಆರಾಧನೆಯ ಸಪ್ತರಾತ್ರೋತ್ಸವ ಕೂಡ ಇಂದಿನಿಂದ ಶುರುವಾಗಿದ್ದು, ಮಠದಲ್ಲಿ ಸಂಭ್ರಮ ಮನೆಮಾಡಿದೆ.

**ಏನೆಲ್ಲಾ ಕಾರ್ಯಕ್ರಮಗಳ ನಡೆಯಲಿವೆ?:** ಸಪ್ತರಾತ್ರೋತ್ಸವದ ಪೈಕಿ ಆಗಸ್ಟ್ 31ರಂದು ಶ್ರೀ ರಾಘವೇಂದ್ರ ಸ್ವಾಮಿಗಳ ಆರಾಧನೆಯ ಮೊದಲ ದಿನ. ಅಂದು ರಾಯರ ಉತ್ಸವ ಮೂರ್ತಿಯ ರಜತ ಸಿಂಹ ವಾಹನೋತ್ಸವ ಜರುಗಲಿದೆ. ಸೆಪ್ಟೆಂಬರ್1 ಮಧ್ಯಾರಾಧನೆ ನಡರಯಲಿದೆ. ಅಂದು ತಿರುಪತಿಯ ವೆಂಕಟೇಶ ದೇವರ ಶೇಷವಸ್ತ್ರ ಸಮರ್ಪಣೆ ನಡೆಯಲಿದೆ. ನಂತರ ರಾಯರ ಮೂಲ ಬೃಂದಾವನಕ್ಕೆ ಮಹಾಪಂಚಾಮೃತ ಅಭಿಷೇಕ,ಪ್ರಾಕಾರದಲ್ಲಿ ಸ್ವರ್ಣ ರಥೋತ್ಸವ ನಡೆಯಲಿದೆ. ಸೆಪ್ಟೆಂಬರ್2 ಕ್ಕೆ ಉತ್ತರಾಧನೆ ಜರುಗಲಿದೆ..

---

## ಪ್ರಮುಖ ಸುದ್ದಿ

# ಮಹಿಳೆಯರ ಸಬಲೀಕರಣಕ್ಕೆ ಸರ್ಕಾರದ ಬದ್ಧ: ಸಚಿವ ಸುಧಾಕರ್

» **ಮೊದಲ ಪುಟದಿಂದ**

ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ ಮಾತನಾಡಿ ಸರ್ಕಾರ ಘೋಷಿಸಿದ 5 ಖಾತ್ರಿ ಯೋಜನೆ ಪೈಕಿ ಶಕ್ತಿ, ಗೃಹಜ್ಯೋತಿ, ಅನ್ನಭಾಗ್ಯ ಹಾಗೂ ಈಗ ಗೃಹಲಕ್ಷ್ಮಿ ಸೇರಿದಂತೆ ನಾಲ್ಕು ಖಾತ್ರಿ ಯೋಜನೆಗಳನ್ನು ಅಧಿಕಾರಕ್ಕೆ ಬಂದ 100 ದಿನದ ಒಳಗಾಗಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿದೆ. ಗೃಹಲಕ್ಷ್ಮೀ ಯೋಜನೆ ಅಧಿಕೃತವಾಗಿ ಚಾಲನೆ ದೊರೆತಿದ್ದು, ಜಿಲ್ಲೆಯ ಎಲ್ಲ 189 ಗ್ರಾಮ ಪಂಚಾಯತಿಗಳಲ್ಲಿಯೂ ಮೈಸೂರಿನ ಕಾರ್ಯಕ್ರಮದ ನೇರಪ್ರಸಾರವನ್ನು ವೀಕ್ಷಿಸಿದ್ದಾರೆ. ಫಲಾನುಭವಿಗಳ ಖಾತೆಗೆ ನೇರವಾಗಿ ಹಣ ಜಮೆಯಾಗಲಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಗೃಹಲಕ್ಷ್ಮೀ ಯೋಜನೆಯಡಿ ಸುಧಾ ಸಿ.ಕೆ. ಪುರ, ಮಂಜುಳಾ ಗಾರೆಹಟ್ಟಿ, ನಸ್ರಿನ್ ತಾಜ್ ಚಿತ್ರದುರ್ಗ, ಪಾಲಮ್ಮ ಸಿ.ಕೆ. ಪುರ ಫಲಾನುಭವಿಗಳಿಗೆ ಸಾಂಕೇತಿಕವಾಗಿ ಮಂಜೂರಾತಿ ಆದೇಶ ಪತ್ರ ವಿತರಿಸಿದರು. ಜಿಲ್ಲೆಯಾದ್ಯಂತ ಗೃಹಲಕ್ಷ್ಮೀ ಯೋಜನೆ



ನೇರ ಪ್ರಸಾರ ವ್ಯವಸ್ಥೆ: ಸರ್ಕಾರದ ಮಹತ್ವಾಂಕ್ಷೆ ಯೋಜನೆಯಾದ ಗೃಹಲಕ್ಷ್ಮೀ ಯೋಜನೆ ಚಾಲನೆ ಕಾರ್ಯಕ್ರಮ ವೀಕ್ಷಿಸಲು ಜಿಲ್ಲೆಯಾದ್ಯಂತ ನೇರ ಪ್ರಸಾರದ ವ್ಯವಸ್ಥೆ ಕಲ್ಪಿಸಲಾಯಿತು.ನಗರಸ್ಥಳೀಯ ಸಂಸ್ಥೆಗಳಾದ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ ಹಾಗೂ ಜಿಲ್ಲೆಯ 189 ಗ್ರಾಮ ಪಂಚಾಯಿತಿಗಳಲ್ಲಿಯೂ ಗೃಹಲಕ್ಷ್ಮೀ ಯೋಜನೆ ಚಾಲನೆಯ ರಾಜ್ಯಮಟ್ಟದ ನೇರ ಪ್ರಸಾರ ಕಾರ್ಯಕ್ರಮ ವೀಕ್ಷಿಸಲು ಟಿವಿ, ಎಲ್.ಇ.ಡಿ ಪರದೆ ಮೂಲಕ ಈ ಕಾರ್ಯಕ್ರಮವನ್ನು ನೇರವಾಗಿ ವೀಕ್ಷಣೆ ಮಾಡಲು ವ್ಯವಸ್ಥೆ ಮಾಡಲಾಯಿತು. ಗೃಹಲಕ್ಷ್ಮೀ ಯೋಜನೆಯ ಫಲಾನುಬವಿಗಳು ಯೋಜನೆಯ ಚಾಲನೆ ಕಾರ್ಯಕ್ರಮದಲ್ಲಿಹಬ್ಬದರೀತಿಯಂತೆಸಂಭ್ರಮದಲ್ಲಿ ಪಾಲ್ಗೊಂಡು ಸಂಭ್ರಮಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು, ಜಿಲ್ಲಾ ಪಂಚಾಯತಿ ಸಿಇಒ ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮರ್ ಮೀನಾ, ಉಪವಿಭಾಗಧಿಕಾರಿ ಎಂ.ಕಾರ್ತಿಕ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ.ಆರ್.ಬಣಕಾರ್ ಸೇರಿದಂತೆ ನಗರಸಭಾ ಸದಸ್ಯರುಗಳು ಹಾಗೂ ಗೃಹಲಕ್ಷ್ಮೀ ಯೋಜನೆ ಫಲಾನುಭವಿಗಳು ಇದ್ದರು. ಕಾರ್ಯಕ್ರಮ ಬಳಿಕ ಮಾಹಿತಿ ನೀಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಅವರು, ಗೃಹ ಲಕ್ಷ್ಮೀ ಯೋಜನೆ ಚಾಲನೆಗೊಂಡ ಮೊದಲ ದಿನವೇ ಜಿಲ್ಲೆಯ 1,20,403 ಫಲಾನುಭವಿಗಳ ಬ್ಯಾಂಕ್ ಖಾತೆಗೆ ತಲಾ 2 ಸಾವಿರ ರೂ. ಜಮಾ ಆಗಿದೆ, ಉಳಿದ ಎಲ್ಲ ಅರ್ಹ ಫಲಾನುಭವಿಗಳಿಗೂ ಹಂತ ಹಂತವಾಗಿ ಹಣ ಜಮಾ ಆಗಲಿದೆ ಎಂದರು.

> ಗೃಹಲಕ್ಷ್ಮೀ ಯೋಜನೆ ಜಾರಿಗೊಳಿಸಿ, ನಮಗೆ ಪ್ರತಿ ತಿಂಗಳು 2 ಸಾವಿರ ದೊರಕುವಂತೆ ಮಾಡಿರುವ ಸರ್ಕಾರಕ್ಕೆ ಧನ್ಯವಾದಗಳು, ಮನೆಯ ಸಣ್ಣ ಪುಟ್ಟ ಖರ್ಚಿಗೂ ಇತರರ ಮುಂದೆ ಕೈ ಚಾಚುವ ಸ್ಥಿತಿ ಇನ್ನು ನಮಗೆ ಇರುವುದಿಲ್ಲ. ಈ ಯೋಜನೆಯನ್ನು ಸರ್ಕಾರ ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸದಂತೆ ಮುಂದುವರೆಸಿಕೊಂಡು ಹೋಗಬೇಕು.
>
> » **ಕಮಲಮ್ಮ, ಕೆಳಗೋಟೆ, ಚಿತ್ರದುರ್ಗ**

> ಪ್ರತಿ ತಿಂಗಳು 2 ಸಾವಿರ ರೂ. ಸರ್ಕಾರ ನಮಗೆ ಕೊಡುವ ಗೃಹಲಕ್ಷ್ಮಿ ಯೋಜನೆ ಜಾರಿಗೊಳಿಸಿ, ಪ್ರತಿ ದಿನ ದುಡಿದು ಜೀವನ ಸಾಗಿಸುವ ನಮ್ಮಂತಹ ಬಡ ಕೂಲಿ ಕಾರ್ಮಿಕರ ಕುಟುಂಬಗಳಿಗೆ ಆರ್ಥಿಕ ಭದ್ರತೆ ನೀಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ.
>
> » **ನಸೀರಾ ಬಿ., ನೆಹರು ನಗರ, ಚಿತ್ರದುರ್ಗ**

> ಗೃಹಲಕ್ಷ್ಮೀ ಯೋಜನೆಯಡಿ ಈವರೆಗೆ ಒಟ್ಟು 3.54 ಲಕ್ಷ ಮಹಿಳೆಯರು ನೊಂದಣಿ ಮಾಡಿಸಿದ್ದು, ಫಲಾನುಭವಿಗಳ ನೋಂದಣಿಯಲ್ಲಿ ಚಿತ್ರದುರ್ಗ ಜಿಲ್ಲೆ ರಾಜ್ಯದಲ್ಲೇ 2ನೇ ಸ್ಥಾನದಲ್ಲಿದೆ. ಮಹಿಳೆಯನ್ನು ಕೇಂದ್ರವಾಗಿಸಿಕೊಂಡು ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ. ಮಹಿಳೆಯರು ಆರ್ಥಿಕವಾಗಿ ಸಬಲರಾಗುವುದರೊಂದಿಗೆ ಸ್ವಾವಲಂಬಿ ಹಾಗೂ ಸ್ವಾಭಿಮಾನದ ಜೀವನ ಕಟ್ಟಿಕೊಳ್ಳಬೇಕು ಎಂದು ಕರೆ ನೀಡಿದರು.
>
> » **ದಿವ್ಯಪ್ರಭು.ಜಿ.ಆರ್.ಜೆ ಜಿಲ್ಲಾಧಿಕಾರಿಗಳು.**

> ಈಹಿಂದೆ 2014 ರಿಂದ 2018 ವರೆಗೆ ಅಧಿಕಾರ ನಡೆಸಿದ ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ನೀಡಿದ 168 ಭರವಸೆಗಳನ್ನು ಈಡೇರಿಸಿದ್ದು ಮಾತ್ರವಲ್ಲದೆ, ಇನ್ನೂ ಹಲವಾರು ಯೋಜನೆ ಜಾರಿಗೊಳಿಸಿತ್ತು. ಈ ಬಾರಿಯೂ ಪ್ರಣಾಳಿಕೆಯಲ್ಲಿ ನೀಡಿದ ಅಷ್ಟು ಭರವಸೆಗಳನ್ನು ಈಡೇರಿಸಲಾಗುವುದು.
>
> » **ಡಿ.ಸುಧಾಕರ್ ಉಸ್ತುವಾರಿ ಸಚಿವ**

## ಫಾಸ್ಟ್ ನ್ಯೂಸ್

### ಗುರುವಾಯೂರು ಶ್ರೀಕೃಷ್ಣ ದರ್ಶನ ಪಡೆದ ಮಾಜಿ ಸಿಎಂ ಬಿಎಸ್‌ವೈ

ಕೇರಳ ರಾಜ್ಯದ ತ್ರಿಶೂರ್ ಜಿಲ್ಲೆಯಲ್ಲಿರುವ ಗುರುವಾಯೂರು ದೇವಸ್ಥಾನಕ್ಕೆ ಬಿಎಸ್ ಯಡಿಯೂರಪ್ಪ ಭೇಟಿ ನೀಡಿದ್ದು ಶ್ರೀಕೃಷ್ಣ ದರ್ಶನ ಪಡೆದಿದ್ದಾರೆ. ದರ್ಶನ ಪಡೆದ ಬಳಿಕ ದೇವಸ್ಥಾನದ ಕಾರ್ಯಕ್ರಮದಲ್ಲಿ ಬಿಎಸ್‌ವೈ ಭಾಗಿಯಾಗಲಿದ್ದಾರೆ. ಃಖಜ ಜೊತೆ ಪೂಜೆಯಲ್ಲಿ ಶಾಸಕ ಎಸ್. ಆರ್.ವಿಶ್ವನಾಥ್ ಕೂಡ ಭಾಗಿಯಾಗಲಿದ್ದಾರೆ.

### ಗೃಹಲಕ್ಷ್ಮಿ ಕಾರ್ಯಕ್ರಮಕ್ಕೆ ಬಂದಿದ್ದ ಮಹಿಳೆ ಮೇಲೆ ಬಿದ್ದ ಹಲಸಿನ ಕಾಯಿ

ಇಂದು ಮೈಸೂರಿನಲ್ಲಿ ಗೃಹಲಕ್ಷ್ಮಿ ಕಾರ್ಯಕ್ರಮ ಚಾಲನೆ ಹಿನ್ನಲೆ ರಾಜ್ಯದ ಎಲ್ಲಾ ಕಡೆಗಳನ್ನು ಕಾರ್ಯಕ್ರಮ ನಡೆಸಲಾಗುತ್ತಿದೆ. ಅದರಂತೆ ಆನೆಕಲ್‌ನಲ್ಲೂ ಗೃಹಲಕ್ಷ್ಮಿ ಯೋಜನೆ ಚಾಲನೆ ಕಾರ್ಯಕ್ರಮ ಆಯೋಜಿಸಲಾಗಿದೆ. ಮಂಟಪ ಗ್ರಾಮ ಪಂಚಾಯಿತಿ ಕಚೇರಿ ಬಳಿ ಕಾರ್ಯಕ್ರಮ ಆಯೋಜಿಸಲಾಗಿದ್ದು ಕುಳಿತುಕೊಳ್ಳಲು ಸರಿಯಾದ ವ್ಯವಸ್ಥೆ ಇಲ್ಲದೆ ಮಹಿಳೆಯರು ಪರದಾಡುತ್ತಿದ್ದಾರೆ. ಇನ್ನು ಮಹಿಳೆ ತಲೆಯ ಮೇಲೆ ಹಲಸಿನ ಕಾಯಿ ಬಿದ್ದಿದ್ದು ಇತರೆ ಮಹಿಳೆಯರು ಹಾರೈಕೆ ಮಾಡಿದ್ದು ಆರೋಗ್ಯ ಕೇಂದ್ರದ ಸಿಬ್ಬಂದಿ ಪ್ರಾಥಮಿಕ ಚಿಕಿತ್ಸೆ ನೀಡಿದ್ದಾರೆ.

### ರಾಹುಲ್‌ಗೆ ರಾಖಿ ಕಟ್ಟಲು ಕಾದು ನಿಂತ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪಾ

ರಾಹುಲ್ ಗಾಂಧಿಗೆ ರಾಖಿ ಕಟ್ಟಲು ಮಹಿಳಾ ಕಾಂಗ್ರೆಸ್ ನಾಯಕಿಯರು ಮೈಸೂರು ವಿಮಾನ ನಿಲ್ದಾಣದ ಬಳಿ ಕಾದು ನಿಂತಿದ್ದಾರೆ. ರಾಹುಲ್ ಗಾಂಧಿಗೆ ತಾಯಿ ಚಾಮುಂಡೇಶ್ವರಿ ಪಂಚಲೋಹದ ಪ್ರತಿಮೆ ನೀಡಿ ಮಹಿಳೆಯರು ಸ್ವಾಗತಿಸಲಿದ್ದಾರೆ.

### ಹೆಚ್‌ಡಿ ಕುಮಾರಸ್ವಾಮಿ ಆರೋಗ್ಯ ವಿಚಾರಿಸಿ ತೆರಳಿದ ಅನಿತಾ

ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿಗೆ ಅನಾರೋಗ್ಯ ಹಿನ್ನೆಲೆ ಜಯನಗರ ಅಪೋಲೊ ಆಸ್ಪತ್ರೆಗೆ ದಾಖಲಾಗಿದ್ದು ಕುಮಾರಸ್ವಾಮಿ ಆರೋಗ್ಯ ವಿಚಾರಿಸಿ ಅನಿತಾ ಕುಮಾರಸ್ವಾಮಿ ತೆರಳಿದ್ರು. ಜ್ವರದಿಂದಾಗಿ ಮಾಜಿ ಸಿಎಂ ಕುಮಾರಸ್ವಾಮಿ ಆಸ್ಪತ್ರೆಗೆ ದಾಖಲಾಗಿದ್ದಾರೆ.

### ಕೊಡಗಿನಲ್ಲಿ ಯುವ ಅರಣ್ಯಾಧಿಕಾರಿ ನೇಣಿಗೆ

ಮಡಿಕೇರಿ ನಗರದ ಅರಣ್ಯ ಇಲಾಖೆ ವಸತಿಗೃಹದಲ್ಲಿ ಮಂಡ್ಯ ಮೂಲದ ಅರಣ್ಯ ಇಲಾಖೆ ಆಖಈಔ ರಶ್ಮಿ(27) ಆತ್ಮಹತ್ಯೆಗೆ ಶರಣಾಗಿದ್ದಾರೆ. ಕಳೆದ 2 ವರ್ಷಗಳಿಂದಕೊಡಗಿನಲ್ಲಿಕಾರ್ಯನಿರ್ವಹಿಸುತ್ತಿದ್ದ ರಶ್ಮಿ ಆತ್ಮಹತ್ಯೆ ಮಾಡಿಕೊಂಡಿದ್ದು ನಿಖರ ಕಾರಣ ತಿಳಿದು ಬಂದಿಲ್ಲ. ಸ್ಥಳಕ್ಕೆ ಮಡಿಕೇರಿ ನಗರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

### ಆಸ್ತಿ ವಿಚಾರಕ್ಕೆ ಮಚ್ಚಿನಿಂದ ಕೊಚ್ಚಿ ಅಣ್ಣ, ಅತ್ತಿಗೆಯ ಬರ್ಬರ ಕೊಲೆ

ಆಸ್ತಿ ವಿಚಾರಕ್ಕೆ ಮೈಸೂರಿನಲ್ಲಿ ಡಬಲ್ ಮರ್ಡರ್ ಆಗಿದೆ. ಮಚ್ಚಿನಿಂದ ಕೊಚ್ಚಿ ಅಣ್ಣ, ಅತ್ತಿಗೆಯ ಬರ್ಬರ ಕೊಲೆ ಮಾಡಿದ್ದಾರೆ. ಮೈಸೂರು ಜಿಲ್ಲೆ ನರಸೀಪುರ ತಾಲೂಕಿನ ನುಗ್ಗಳ್ಳಿಕೊಪ್ಪಲು ಗ್ರಾಮದಲ್ಲಿ ಪತಿ ಶಿವಲಿಂಗೇಗೌಡ(55), ಪತ್ನಿ ಭಾರತಿ(47) ಕೊಲೆ ನಡೆದಿದೆ. ಶಿವಲಿಂಗೇಗೌಡ ಸೋದರ ಹನುಮಂತೇಗೌಡ(50)ಆಸ್ತಿ ವಿಚಾರಕ್ಕೆ ಸಹೋದರನನ್ನೇ ಕೊಲೆ ಮಾಡಿದ್ದಾನೆ.

### ರಾಜ್ಯದಲ್ಲಿ ವಾಡಿಕೆಗಿಂತ ಹೆಚ್ಚಾದ ಉಷ್ಣಾಂಶ

ಮಳೆ ಕೊರತೆ ಎಫೆಕ್ಟ್‌ನಿಂದಾಗಿ ಉಷ್ಣಾಂಶ ವಾಡಿಕೆಗಿಂತ3ಡಿಗ್ರಿಏರಿಕೆಯಾಗಿದೆ.ಬೆಂಗಳೂರಿನಲ್ಲಿ ಶೇ 23ರಷ್ಟು ಮಳೆ ಕೊರತೆ ಇದೆ. ಬೆಂಗಳೂರಿನಲ್ಲಿ 31.ಸೆಂ.ಮೀ ವಾಡಿಕೆ ಮಳೆಯಾಗಬೇಕಿತ್ತು, ಆದರೆ 22.6 ಸೆಂ ಮಳೆಯಾಗಿದೆ. ಮಳೆ ಕೊರತೆಯಿಂದ ಗರಿಷ್ಠ ಉಷ್ಣಾಂಶ ದಾಖಲಾಗುತ್ತಿದೆ.

### ಮೈಸೂರಿನ ಲಿಂಗಾಬುದಿ ಕೆರೆಯಲ್ಲಿ ಮೀನು ಸಾವು

ಮೈಸೂರಿನರಾಮಕೃಷ್ಣನಗರದಲ್ಲಿರುವಲಿಂಗಾಬುದಿ ಕೆರೆಯಲ್ಲಿ ಮೀನುಗಳ ಸಾವು ಮುಂದುವರಿದಿದೆ. ಕೊಳಚೆ ನೀರು ಕೆರೆಗೆ ಮಿಶ್ರಣವಾಗುತ್ತಿರುವುದರಿಂದ ಜಲಚರ ಸಾವು ಆರೋಪ ಕೇಳಿ ಬಂದಿದೆ. ಅರಣ್ಯ ಇಲಾಖೆ ನಿರ್ವಹಣೆಯಲ್ಲಿರುವ ಕೆರೆಯಲ್ಲಿ ಮೀನುಗಳ ಮಾರಣಹೋಮವಾಗುತ್ತಿದೆ.

### ಜಿಲ್ಲಾ ಹಾಗೂ ತಾಲ್ಲೂಕು ಆಡಳಿತ ಎಚ್ಚೆತ್ತುಕೊಳ್ಳಬೇಕು

# ಬರಪೀಡಿತ ಪ್ರದೇಶವೆಂದು ಘೋಷಿಸಲು ಆಗ್ರಹ

» **ಚಳ್ಳಕೆರೆ**

ಕಳೆದ ಹಲವಾರು ತಿಂಗಳುಗಳಿಂದ ಚಳ್ಳಕೆರೆ ತಾಲ್ಲೂಕು ಸೇರಿದಂತೆ ವಿವಿಧೆಡೆ ಜಾನುವಾರುಗಳಿಗೆ ಮೇವಿನ ಬರ ಉಂಟಾಗಿದ್ದು, ಈ ಸಮಸ್ಯೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸದೆ ನಿರ್ಲಕ್ಷ್ಯೆ ವಹಿಸುವ ಮೂಲಕ ಮೂಕ ಪಶುಗಳನ್ನು ಹಸಿವಿನಿಂದ ನರಳುವಂತೆ ಮಾಡಿದೆ ಎಂದು ಪಾವಗಡ ರಾಮಕೃಷ್ಣ ಆಶ್ರಮದ ಜಪಾನಂದಸ್ವಾಮೀಜಿ ಆರೋಪಿಸಿದರು.

ನಗರದ ಪ್ರವಾಸಿಮಂದಿರದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿ ಮಾತನಾಡಿ, ಕಳೆದ ಸುಮಾರು ಎರಡು ತಿಂಗಳ ಹಿಂದೆ ಕ್ಷೇತ್ರದ ಶಾಸಕರು ಹಾಗೂ ಜಿಲ್ಲಾಡಳಿತಕ್ಕೆ ಜಾನುವಾರುಗಳಿಗೆ ಮೇವು ನೀಡುವ ವಿಚಾರದಲ್ಲಿ ಒತ್ತಾಯ ಮಾಡಿದ್ದೆ. ಸರ್ಕಾರ ಕೂಡಲೇ ಮೂಕಪ್ರಾಣಿಗಳ ಸಂಕಷ್ಟಕ್ಕೆ ನೆರವಾಗಬೇಕು ಎಂದು ವಿನಂತಿಸಿದ್ದೆ. ವಿಶೇಷವಾಗಿನನ್ನಿವಾಳಗ್ರಾಮಪಂಚಾಯಿತಿ ವ್ಯಾಪ್ತಿಯ ಬೊಮ್ಮದೇವರಹಟ್ಟಿಯಲ್ಲಿರುವ ಸುಮಾರು 400ಕ್ಕೂ ಹೆಚ್ಚು ದೇವರ ರಾಸುಗಳಿಗೆ ಮೇವು ನೀಡುವಂತೆ ಪ್ರಾರ್ಥಿಸಿದ್ದೆ. ಆದರೆ, ಈ ಬಗ್ಗೆ ತಾಲ್ಲೂಕು ಮತ್ತು ಜಿಲ್ಲಾಡಳಿತ ಕಾರ್ಯಗತವಾಗದೆ ಮೌನವಹಿಸಿರುವುದು ನೋವಿನ ಸಂಗತಿ. ಈಗಲಾದರೂ ಜಿಲ್ಲಾಡಳಿತ ಎಚ್ಚೆತ್ತುಕೊಂಡು ಜಾನುವಾರುಗಳಿಗೆ ಮೇವು ವಿತರಿಸಬೇಕು.



ಬೆಂಗಳೂರಿನ ಇನ್‌ಫೋಸಿಸ್ ಸುಧಾಮೂರ್ತಿ ಫೌಂಡೇಷನ್ ವತಿಯಿಂದ ರಾಮಕೃಷ್ಣ ಆಶ್ರಮದ ಮೂಲಕ ಕೂಡ್ಲಗಿ, ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕು ವ್ಯಾಪ್ತಿಯಲ್ಲಿ ಸುಮಾರು 180ಟನ್ ಹುಲ್ಲು ವಿತರಣೆ ಮಾಡಲಾಗಿದೆ. ಮಳೆಬಾರದೆ ಬೇಸಿಗೆ ಹಿನ್ನೆಲೆಯಲ್ಲಿ ಜಾನುವಾರುಗಳು ಬಿಸಿಲ ತಾಪತಾಳದೆ ಹಸುವಿನಿಂದ ಒದ್ದಾಡುತ್ತಿದ್ದು ಕಡೆ ಪಕ್ಷ ಹೊಟ್ಟೆತುಂಬಾ ಮೇವಾದರೂ ನೀಡಬೇಕಿದೆ. ಜಿಲ್ಲಾ, ತಾಲ್ಲೂಕು ಆಡಳಿತದ ನಿರ್ಲಕ್ಷ್ಯ ತನವನ್ನು ನಾನು ಬೇಸರದಿಂದಲೇ ಖಂಡಿಸುತ್ತೇನೆ. ದಯಮಾಡಿ ಸರ್ಕಾರ ಚಳ್ಳಕೆರೆ ತಾಲ್ಲೂಕನ್ನು ಕೂಡಲೇ ಬರಪೀಡಿತ ತಾಲ್ಲೂಕು ಎಂದು ಘೋಷಿಸುವ ಜೊತೆಗೆ ಜಾನುವಾರುಗಳಿಗೆ ಮೇವು ಸೇರಿದಂತೆ ರೈತ ಸಮುದಾಯಕ್ಕೆ ಅಗತ್ಯವಿರುವ ಎಲ್ಲಾ ಸೌಲಭ್ಯ ನೀಡಬೇಕು ಎಂದು ಆಗ್ರಹಿಸಿದರು.

ಕಿಲಾರ ಪಾಲಯ್ಯ, ದೊಡ್ಡ ಬೋರಯ್ಯ ಮಾತನಾಡಿ, ಇನ್‌ಫೋಸಿಸ್ ಸುಧಾಮೂರ್ತಿ ಮೂಲಕ ನಮ್ಮ ಜಾನುವಾರುಗಳ ಜೀವ ಸಂರಕ್ಷಣೆಯನ್ನು ಉಚಿತವಾಗಿ ಮೇವು ವಿತರಿಸುವ ಮೂಲಕ ಮಾಡಿದ್ದಾರೆ. ಅವರು ಸಕಾಲದಲ್ಲಿ ನಮಗೆ ಮೇವಿನ ಸೌಲಭ್ಯ ಕಲ್ಪಿಸದಿದ್ದರೆ ನಮ್ಮ ಜಾನುವಾರುಗಳು ಸಹ ಉಪವಾಸದಿಂದ ಸಾವಿನತ್ತ ಮುಖ ಮಾಡುತ್ತಿದ್ದವು. ಸ್ವಾಮೀಜಿಯವರ ಕೃಪೆಯಿಂದ ಆ ಸ್ಥಿತಿ ಉಂಟಾಗಿಲ್ಲ. ತಾಲ್ಲೂಕು, ಜಿಲ್ಲಾ ಆಡಳಿತ ಕೂಡಲೇ ಎಚ್ಚೆತ್ತುಕೊಳ್ಳಬೇಕೆಂದು ಆಗ್ರಹಿಸಿದರು. ಈ ಬಾರಿ ಮಳೆ ಬರುವವರೆಗೂ ಮೇವು ನೀಡಬೇಕೆಂದು ಸ್ವಾಮಿಯಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಚನ್ನಕೇಶವ, ದೊರೆನಾಗರಾಜು, ರಂಗಪ್ಪ, ಬೋಸಯ್ಯ, ಪಾಪಣ್ಣ, ಮಹೇಶ್‌ಕುಮಾರ್, ಸಿದ್ದೇಶ್ ಮುಂತಾದವರು ಉಪಸ್ಥಿತರಿದ್ದರು.

# ಮಳೆಗಾಗಿ ಪ್ರಾರ್ಥಿಸಿ ಪ್ರದೋಷ ಪೂಜೆ



» **ಚಳ್ಳಕೆರೆ**

ಇತ್ತೀಚಿನ ದಿನಗಳಲ್ಲಿ ತಾಲ್ಲೂಕಿನಾದ್ಯಂತ ಪೂರ್ಣಪ್ರಮಾಣದಲ್ಲಿ ಮಳೆ ಕೈಕೊಟ್ಟು ರೈತರ ಬೆಳೆಗಳು ನೆಲಕಚ್ಚಿ ರೈತರನ್ನು ಸಂಕಷ್ಟಕ್ಕೆ ಸಿಲುಕಿಸಿದ ಹಿನ್ನಲೆಯಲ್ಲಿ ಮಳೆಗಾಗಿ ಪ್ರಾರ್ಥಿಸಿ ತಾಲ್ಲೂಕಿನ ಲಕ್ಷ್ಮಿಪುರ ಗ್ರಾಮದ ಭವಾನಿಶಂಕರ ದೇವಸ್ಥಾನದಲ್ಲಿ ಶ್ರಾವಣ ಮಾಸದ ಹಿನ್ನಲೆಯಲ್ಲಿ ಪ್ರದೋಷ ಪೂಜೆಯನ್ನು ನಡೆಸಲಾಯಿತು ಎಂದು ದೇವಸ್ಥಾನದ ಧರ್ಮದರ್ಶಿ, ಅರ್ಚಕರೂ ಆದ ಡಾ.ಅನಂತರಾಮ್ ಗೌತಮ್ ತಿಳಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇವಸ್ಥಾನ ಮತ್ತು ಇತರೆ ದೈವದ ಸ್ಥಳಗಳಲ್ಲಿ ಪೂಜೆ ಮಾಡುವ ಉದ್ದೇಶ ಸಂಕಷ್ಟಗಳ ಪರಿಹಾರಕ್ಕಾಗಿ ನಮ್ಮ ತಾಲ್ಲೂಕಿನಾದ್ಯಂತ ಈ ವರ್ಷವೂ ಸಹ ಮಳೆ ಕೈಕೊಟ್ಟಿದ್ದು, ಜನರ ನಿರೀಕ್ಷೆಹುಸಿಯಾಗಿದೆ.ಪ್ರತಿನಿತ್ಯವೂ ಮಳೆಗಾಗಿ ಪರಿತಪಿಸುವ ಸ್ಥಿತಿ ಉಂಟಾಗಿದೆ. ಜಮೀನನಲ್ಲಿ ಉಳಿದಿರುವ ಸ್ವಲ್ಪ ಪ್ರಮಾಣದ ಬೆಳೆಯನ್ನು ಉಳಿಸಿಕೊಳ್ಳುವ ಪ್ರಯತ್ನ ರೈತರದ್ದಾಗಿದೆ. ಹೀಗಾಗಿ ರೈತರ ಹಿತವನ್ನು ಕಾಪಾಡಲು ದೇವರ ಮೊರೆ ಹೋಗಲಾಗಿದೆ ಎಂದರು.ಪೂಜಾ ಕಾರ್ಯಗಳನ್ನು ನಡೆಸಿಕೊಟ್ಟ ವೇದಬ್ರಹ್ಮ ನಾಗಶಯನ ಗೌತಮ್ ಮಾತನಾಡಿ, ಧಾರ್ಮಿಕ ವಿಚಾರಗಳು ಸದಾ ನಮಗೆ ಸ್ಪೂರ್ತಿಯಾಗಿರುತ್ತವೆ. ಬದುಕಿನಲ್ಲಿ ಎದುರಾಗುವ ಎಲ್ಲಾ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಲು ದೇವರ ಪೂಜೆಯಲ್ಲಿ ತೊಡಗುತ್ತೇವೆ. ಇಂದು ಸಹ ಮಳೆಗಾಗಿ ಪ್ರದೋಷ ಪೂಜೆಯನ್ನು ಸಂಪ್ರದಾಯ ಬದ್ಧವಾಗಿಮಾಡಲಾಗಿದೆಎಂದರು. ಕಾರ್ಯಕ್ರಮದಲ್ಲಿ ನಿವೃತ್ತ ಮುಖ್ಯ ಶಿಕ್ಷಕ ಎಂ.ಸತ್ಯನಾರಾಯಣ್, ತ ೀ ಜ ಸ್ವಿ ಶ ಾ ಸ್ತ್ರಿ , ಸೂರ್ಯನಾರಾಯಣಶಾಸ್ತ್ರಿ, ನಾಗೇಶ್ ಮುಂತಾದವರು ಭಾಗವಹಿಸಿದ್ದರು.

## ವರುಣನಿಗಾಗಿ ಕತ್ತೆಗಳ ಮದುವೆ



**ಚಳ್ಳಕೆರೆ:** ವಿಜ್ಞಾನ, ತಾಂತ್ರಿಕತೆ ವೈಜ್ಞಾನಿಕವಾಗಿ ಮುಂದುವರೆದಿದ್ದರೂ ಸಹ ನಮ್ಮ ಪೂರ್ವಜನರು ನಡೆಸಿಕೊಟ್ಟ ಹಾದಿಯಲ್ಲಿ ನಾವು ಸಾಗಬೇಕೆಂಬ ಸ್ಥಿತಿ ಈಗ ನಮಗೆ ಎದುರಾಗಿದೆ. ಕಾರಣ, ಪ್ರಸ್ತುತ ವರ್ಷದ ಮಳೆ ಮಾಯವಾಗಿ ರೈತರ ಬದುಕು ಬೀದಿಗೆ ಬರುವಂತಾಗಿದೆ. ಮಳೆಗಾಗಿ ಪ್ರಾರ್ಥಿಸಿ ತಾಲ್ಲೂಕಿನ ಹುಲಿಕುಂಟೆ ಗೊಲ್ಲರಹಟ್ಟಿಯಲ್ಲಿ ಕತ್ತೆಗಳಿಗೆ ಮದುವೆ ಮಾಡಿ ಗ್ರಾಮದಲ್ಲಿ ಮೆರವಣಿಗೆನಡೆಸಿ ಮಳೆಗಾಗಿ ಪ್ರಾರ್ಥಿಸಲಾಯಿತು.ಮೆರವಣಿಗೆಯಲ್ಲಿ ಭಾಗವಹಿಸಿದ್ದ ಲಿಂಗರಾಜು, ಪ್ರಕಾಶ್, ವಸಂತಕುಮಾರ್, ಕೃಷ್ಣಮೂರ್ತಿ, ಚಿತ್ತಪ್ಪ, ಕದ್ರಮ್ಮ, ಮಂಗಳಗೌರಿ, ಅರುಣ್ ಕುಮಾರ್, ತಿಪ್ಪೇಸ್ವಾಮಿ ಪೂಜಾರಿ ಮುತ್ತೇಶ, ರಾಜಣ್ಣನವರ ಮಾರ್ಗದರ್ಶನದಲ್ಲಿ ಕತ್ತೆಗಳ ಮದುವೆ, ಮೆರವಣಿಗೆಯನ್ನು ನಡೆಸಿ ಜನರ ಗಮನ ಸೆಳೆದರು. ಎಲ್ಲಿ ಕತ್ತಗಳ ಮದುವೆಯಾಗುತ್ತದೆಯೋ ಅಲ್ಲಿ ಸಮೃದ್ಧಿ ಮಳೆಯಾಗುತ್ತದೆ ಎಂಬ ನಂಬಿಕೆ ಈ ಗ್ರಾಮದ ಜನರದ್ದು. ಆದುದ್ದರಿಂದ ಈ ಕಾರ್ಯವನ್ನು ಸಂಪ್ರದಾಯ ಬದ್ಧವಾಗಿ ಆಚರಣೆ ಮಾಡಲಾಗಿದೆ ಎಂದು ತಿಳಿಸಿದರು.

## ಯಾದವ ಸಮುದಾಯದಿಂದ ಶ್ರಾವಣ ಮಾಸದ ನಾಗರ ಪಂಚಮಿ ಆಚರಣೆ



» **ಚಳ್ಳಕೆರೆ**

ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ನಾಗರ ಪಂಚಮಿ ಹಬ್ಬವನ್ನು ಶ್ರಾವಣ ಮಾಸದ ಹಿನ್ನೆಲೆಯಲ್ಲಿ ಸಂಪ್ರದಾಯ ಬದ್ಧವಾಗಿ ಆಚರಣೆ ಮಾಡುತ್ತಿದ್ದು, ಪರಶುರಾಮಪುರ ದೊಡ್ಡ ಚೆಲ್ಲೂರು ಕಾವಲಿಗೆ ಕಾಟಪ್ಪನಹಟ್ಟಿಯ ಗೊಲ್ಲ ಸಮುದಾಯದ ಜನಾಂಗದವರು ಪ್ರತಿವರ್ಷದಂತೆ ಈ ವರ್ಷವೂ ಶ್ರಾವಣ ಮಾಸದ ಎರಡನೇ ಸೋಮವಾರ ಹಿನ್ನೆಲೆಯಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ನಾಗರ ಪಂಚಮಿ ಪ್ರಯುಕ್ತ ಅಲ್ಲಿರುವ ನಾಗರಕಲ್ಲು, ಹುತ್ತಗಳಿಗೆ ಹಾಲು ಎರೆಯುವ ಬದಲು ಅನ್ನ ಹುಣಸೆ ಹುಳಿಯಿಂದ ಮಾಡಿದ ಅಡುಗೆಯನ್ನು ನೈವೈದ್ಯ ಮಾಡಿ ಪ್ರಸಾದವನ್ನು ಸ್ವೀಕರಿಸಿ ಪುನಃ ಕಾಲ್ನಡಿಗೆಯಲ್ಲಿ ವಾಪಾಸ್ ಆಗಿದ್ದು, ಈ ಪೂಜಾ ಕಾರ್ಯದಲ್ಲಿ ಸಮುದಾಯದ ಸುಮಾರು 100ಕ್ಕೂ ಹೆಚ್ಚು ಕುಟುಂಬಗಳು ಪಾಲ್ಗೊಂಡಿದ್ದವು. ಸುಮಾರು ಏಳೆಂಟು ತಲೆ ಮಾರಿನವರಿಂದು ಈ ಆಚರಣೆ ನಡೆದುಕೊಂಡು ಬರುತ್ತಿರುವ ಪದ್ದತಿ. ಹಿರೊಯರು ಹೇಳುವ ಪ್ರಕಾರ ಪ್ರತಿ ವರ್ಷ 37 ಕಿ.ಮೀ ನಡೆದು ಬರಲು ಆಗುವುದಿಲ್ಲ ಎಂದು ಕರಿಕಂಬಳಿಯಲ್ಲಿ ಇಲ್ಲಿ ನೆಲೆಸಿರುವ ನಾಗರ ಕಲ್ಲುಗಳನ್ನು ಚಳ್ಳಕೆರೆ ನಗರದ ಸಮೀಪ ತೆಗೆದು ಪ್ರತಿಷ್ಠಾಪನೆ ಮಾಡುವ ಪ್ರಯತ್ನ ಮಾಡಲು ಮುಂದದಾಗ. ನಾಗರಕಲ್ಲು ಸಮೇತರಾಗಿ ವೇದವತಿ ನದಿಯಲ್ಲಿ ರಾತ್ರಿ ತಂಗಲಾಗಿತಂತೆ. ಮುರುದಿನ ಬೆಳ್ಳಗೆ ಎದ್ದು ನೋಡಿದಾಗ ಆ ನಾಗರಕಲ್ಲು ಮಾಯಾವಾಗಿ ಮತ್ತೆ ಅದೇ ಸ್ಥಳದಲ್ಲಿ ಇದ್ದವು. ಈ ಹಿನ್ನೆಲೆಯಲ್ಲಿ ನಮ್ಮದು ತಪ್ಪಾಯಿತು ಪ್ರತಿವರ್ಷ ಇಲ್ಲಿಗೆ ಬಂದು ಪೂಜೆ ಸಲ್ಲಿಸುತ್ತೇವೆ ಎಂದು ದೇವರಲ್ಲಿ ಕ್ಷೇಮೆ ಕೇಳಿದರು ಎಂಬ ಇತಿಹಾಸ ಹಿರಿಯರು ಈಗಲೂ ಹೇಳುತ್ತಾರೆ.ಗೌಡರ ಚಿಕ್ಕಣ್ಣ, ರಾಜಣ್ಣ, ರಂಗನಾಥ, ಅಜ್ಜಯ್ಯ, ಮಂಜುನಾಥ, ಅಜ್ಜಯ್ಯ, ವೀರಭದ್ರಪ್ಪ, ತಿಪ್ಪೇಸ್ವಾಮಿ, ಪೂಜಾರಿ ಸುರೇಶ, ದಾಸಪ್ಪರಾದ ರಂಗಸ್ವಾಮಿ, ತಿಪ್ಪೇಸ್ವಾಮಿ ನೂರಾರು ಭಕ್ತರು ಭಾಗವಹಿಸಿದ್ದು, ಸುಮಾರು ಏಳು ತಲೆಮಾರುಗಳಿಂದ ಈ ಪೂಜಾ ಕಾರ್ಯವನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಸಾಮಾಜಿಕ ನ್ಯಾಯದ ಪರಿಕಲ್ಪನೆಯಲ್ಲಿ 5 ಗ್ಯಾರಂಟಿ ಕೊಟ್ಟು, ಪ್ರಾರಂಭ; ಸಚಿವ ಎಸ್.ಎಸ್.ಮಲ್ಲಿಕಾರ್ಜುನ್

# ಗೃಹಲಕ್ಷ್ಮಿಗೆ ಚಾಲನೆ, ಯಜಮಾನಿಗೆ ರೂ.2000

» **ದಾವಣಗೆರೆ**

ಸಾಮಾಜಿಕ ನ್ಯಾಯದ ಪರಿಕಲ್ಪನೆ ಮತ್ತು ಇದನ್ನು ಎತ್ತಿ ಹಿಡಿಯುವುದಕ್ಕೆ ಚುನಾವಣೆ ಸಂದರ್ಭದಲ್ಲಿ 5 ಗ್ಯಾರಂಟಿ ಕೊಟ್ಟು, ಪ್ರಾರಂಭಿಸಲಾಗಿದೆ. ಜನರಿಗೆ ಹಸಿವು ಮುಕ್ತತೆ, ವಾಸಿಸಲು ಸೂರು, ಆರೋಗ್ಯ ಸಂರಕ್ಷಣೆ ಮತ್ತು ಎಲ್ಲರಿಗೂ ಶಿಕ್ಷಣ ನೀಡುವುದು ನಮ್ಮ ಆದ್ಯತೆಯಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಬುಧವಾರ ದಾವಣಗೆರೆ ಹದಡಿ ರಸ್ತೆಯಲ್ಲಿನ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಸಮುದಾಯ ಭವನದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾದ ಮನೆಯೊಡತಿಗೆ ಪ್ರತಿ ತಿಂಗಳು ಎರಡು ಸಾವಿರ ರೂ.ಗಳನ್ನು ನೀಡುವ ಗೃಹಲಕ್ಷ್ಮಿ ಯೋಜನೆ ಚಾಲನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರಮುಖವಾಗಿ ಚುನಾವಣೆ ಸಂದರ್ಭದಲ್ಲಿ ಐದು ಗ್ಯಾರಂಟಿಗಳನ್ನು ಘೋಷಣೆ ಮಾಡಲಾಗಿತ್ತು. ಅವುಗಳಲ್ಲಿ ಗೃಹಲಕ್ಷ್ಮಿಸೇರಿದಂತೆನಾಲ್ಕುಗ್ಯಾರಂಟಿಗಳನ್ನು ಜಾರಿ ಮಾಡಲಾಗಿದೆ. ಸಾರಿಗೆ ಸಂಸ್ಥೆಗಳಲ್ಲಿ ರಾಜ್ಯದ ಮಹಿಳೆಯರು ಉಚಿತವಾಗಿ ಪ್ರಯಾಣಿಸುವ ಶಕ್ತಿ ಯೋಜನೆ, ಪ್ರತಿ ಮನೆಗೆ ತಿಂಗಳಿಗೆ 200 ಯುನಿ[illegible]ಗಳವರೆಗೆ ಉಚಿತ ವಿದ್ಯುತ್ ಬಳಕೆಯ ಗೃಹಜ್ಯೋತಿ ಯೋಜನೆ, ಅನ್ನಭಾಗ್ಯ ಯೋಜನೆಯಡಿ ಪ್ರತಿಯೊಬ್ಬ ಬಿ.ಪಿ.ಎಲ್.ಕುಟುಂಬದವರಿಗೆ ತಿಂಗಳಿಗೆ 10 ಕೆ.ಜಿ.ಧಾನ್ಯದಲ್ಲಿ ಐದು ಕೆ.ಜಿ.ಧಾನ್ಯ ನೀಡಿ ಉಳಿದ 5 ಕೆಜಿಗೆ ನಗದು ಜಮಾ ಮಾಡಲಾಗುತ್ತಿದೆ. ಗೃಹಭಾಗ್ಯ ಯೋಜನೆಯಡಿ ಆಗಸ್ಟ್ 30 ರಿಂದ ಕುಟುಂಬದ ಯಜಮಾನಿಗೆ ಪ್ರತಿ ತಿಂಗಳು ರೂ.2000 ಗಳನ್ನು ನೀಡಲು ಆರಂಭಿಸಲಾಗಿದೆ. ಮುಂದಿನ ದಿನಗಳಲ್ಲಿ ಪದವೀಧರರಿಗೆ ಮತ್ತು ಡಿಪ್ಲೊಮಾ ಪಾಸಾದವರಿಗೆ ಪ್ರತಿ ತಿಂಗಳು ಎರಡು ವರ್ಷದವರೆಗೆ ರೂ.3000 ಮತ್ತು ರೂ.1500 ಗಳ ಶಿಷ್ಯವೇತನ ನೀಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುತ್ತದೆ ಎಂದರು.



ದಾವಣಗೆರೆ ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯಡಿ 3,27,472 ಮಹಿಳೆಯವರು ನೊಂದಣಿ ಮಾಡಿಸಿದ್ದಾರೆ. ಇವರಿಗೆ ಇನ್ನು ಮುಂದೆ ಪ್ರತಿ ತಿಂಗಳು ಎರಡು ಸಾವಿರ ಅವರ ಖಾತೆಗೆ ನೇರವಾಗಿ ಜಮೆಯಾಗಲಿದೆ. ಇದಕ್ಕಾಗಿ ಜಿಲ್ಲೆಗೆ 64,80,92,000 ರೂ.ಗಳ ಅನುದಾನವನ್ನು ನೀಡಲಾಗಿದೆ. ಜಿಲ್ಲೆಯಲ್ಲಿ ಇನ್ನೂ ಶೇ 15 ರಷ್ಟು ಮಹಿಳೆಯರು ಯೋಜನೆಯಿಂದ ಹೊರಗಿದ್ದು ಮುಂದಿನ ದಿನಗಳಲ್ಲಿ ಇವರಿಗೂ ಯೋಜನೆಯ ಲಾಭ ಸಿಗಲಿದೆ ಎಂದರು.

ಮಹಿಳೆಯರಿಗೆ ನೀಡುವ ಈ ಯೋಜನೆಯಿಂದ ಅವರ ಕುಟುಂಬ ನಿರ್ವಹಣೆಗೆ ಮನೆ ಯಜಮಾನಿಗೆ ಸಹಾಯವಾಗಲಿದೆ. ತಮ್ಮ ಮಕ್ಕಳನ್ನು ಓದಿಸಲು, ಮನೆ ನಿರ್ವಹಣೆಗೆ ಬಳಸುತ್ತಾರೆ. ಇದರಿಂದ ಅವರ ಆರ್ಥಿಕ ಪರಿಸ್ಥಿತಿ ಸುಧಾರಣೆಯಾಗಲಿದ್ದು ಪುನಃ ಅವರಿಂದ ತೆರಿಗೆ ರೂಪದಲ್ಲಿ ಸರ್ಕಾರಕ್ಕೆ ಆದಾಯ ಬರಲಿದ್ದು ಜನರಿಗೆ ಕೊಟ್ಟ ದುಡ್ಡು ಎಲ್ಲಿಗೂ ಹೋಗುವುದಿಲ್ಲ, ಇದೂ ಕೂಡ ಸರ್ಕಾರಕ್ಕೆ ವರಮಾನವೇ ಹೊರತು ನಷ್ಟವಾಗುವುದಿಲ್ಲ ಎಂದರು. ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ಮಾತನಾಡಿ, ನಮ್ಮ ಸರ್ಕಾರ ನುಡಿದಂತೆ ನಡೆಯುತ್ತಿದ್ದು, ಕುಟುಂಬದ ನಿರ್ವಹಣೆಗೆ ಅನುಕೂಲವಾಗಲು ಮನೆಯ ಯಜಮಾನಿಗೆ ಗೃಹಲಕ್ಷ್ಮಿ ಯೋಜನೆಯಿಂದ ಪ್ರತಿ ತಿಂಗಳು ರೂ 2000 ಗಳನ್ನು ನೀಡಲಾಗುತ್ತಿದ್ದು ಯುವನಿಧಿಗೆ ಡಿಸೆಂಬರ್ ನಲ್ಲಿ ಚಾಲನೆ ಸಿಗಲಿದೆ.

ಗ್ಯಾರಂಟಿ ಯೋಜನೆಯಡಿ ನೀಡಲಾಗುತ್ತಿರುವ ಹಣ ಕುಟುಂಬ ನಿರ್ವಹಣೆಗೆ ಅಗತ್ಯವಿದ್ದು ಈ ಹಣವನ್ನು ಬ್ಯಾಂಕುಗಳು ಅವರ ಯಾವುದೇ ಸಾಲಕ್ಕೆ ಜಮೆ ಮಾಡಿಕೊಳ್ಳದಂತೆ ಜಿಲ್ಲಾಧಿಕಾರಿಗಳು ಕ್ರಮವಹಿಸಬೇಕು ಎಂದರು.

ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ಮಾತನಾಡಿ ರಾಜ್ಯದಲ್ಲಿ ಇಂದು ಸುರ್ವಣಾಕ್ಷರದಲ್ಲಿ ಬರೆದಿಡುವ ದಿನ ಇದಾಗಿದ್ದು, ಎಲ್ಲರಿಗೂ ಸಮಪಾಲು, ಸಮಬಾಳು ಎಂಬ ಧ್ಯೇಯೋದ್ದೇಶದಿಂದ ಮಹಿಳೆಯರ ಸಬಲೀಕರಣ ಹಾಗೂ ಅವರಿಗೆ ಶಕ್ತಿ ನೀಡುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಗೃಹಲಕ್ಷ್ಮಿ ನೊಂದಣಿಗೆ ಜಿಲ್ಲೆಯ ಗ್ರಾಮಾಂತರ ಭಾಗದಲ್ಲಿ 194 ಕೇಂದ್ರ ತೆರೆದಿದ್ದು ಯಾವುದೇ ವೆಚ್ಚವಿಲ್ಲದಂತೆ 3,27,462 ಫಲಾನುಭವಿಗಳನ್ನು ನೊಂದಾಯಿಸಲಾಗಿದೆ. ಈ ಯೋಜನೆ ಅನುಷ್ಠಾನಕ್ಕಾಗಿ ಪಂಚಸೂತ್ರಗಳನ್ನು ಅಳವಡಿಸಿಕೊಳ್ಳಲಾಗಿತ್ತು. ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ಪ್ರಜಾ ಪ್ರತಿನಿಧಿಗಳನ್ನು ಆಯ್ಕೆಮಾಡಿದ್ದು, ಮನೆಮನೆಗೆ ತೆರಳಿ ಗೃಹಲಕ್ಷ್ಮೀ ಯೋಜನೆ ನೊಂದಣಿಯನ್ನು ಯಶಸ್ವಿಗೊಳಿಸಲಾಯಿತು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T